(ಗೊಂದಲ)

ಉಪಾಧ್ಯಕ್ಷರು: ಇಷ್ಟ ಇರುವವರು ಹೋಗಬಹುದು, ಕಷ್ಟ ಇರುವವರು ಬಿಡಬಹುದು. ಈಗ ಸದನವನ್ನು ನಾಳೆ ಬೆಳಿಗ್ಗೆ 9 ಗಂಟೆಯವರೆಗೆ ಮುಂದೂಡುತ್ತಿದ್ದೇನೆ.

(ಸದನವು ಸಂಜೆ 6 ಗಂಟೆ 17 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ 28ನೇ ಮಾರ್ಚ್ ಮಾಹೆ 2006ರ ಮಂಗಳವಾರ ಬೆಳಿಗ್ಗೆ 9.00 ಗಂಟೆಗೆ ಸೇರಲು ನಿಶ್ಚಯಿಸಿತು)

ಅನುಬಂಧ-I

129(182) ಶ್ರೀ ಅಪ್ಪಾಸಾಹೇಬ್(ಅಪ್ಪು)ಮಲ್ಲಪ್ಪ ಪಟ್ಟಣಶೆಟ್ಟಿ(ಬಿಜಾಪುರ): ಮಾನ್ಯ ಉಪ ಮುಖ್ಯಮಂತ್ರಿ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ವಿಮಾನ ನಿಲ್ದಾಣಗಳು ಯಾವುವು;

ಆ) ವಿಶ್ವವಿಖ್ಯಾತ ಗೋಳಗುಮ್ಮಟವನ್ನು ಹೊಂದಿರುವ ಈ ನಗರಕ್ಕೆ ಬರುವ ಪ್ರವಾಸಿಗರಿಗೆ ಅದರಲ್ಲೂ ವಿದೇಶಿ ಪ್ರವಾಸಿಗರಿಗೆ ವಿಮಾನಯಾನ ಸೌಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ವಿಮಾನ ನಿಲ್ದಾಣ ಸ್ಥಾಪಿಸಲು ರಾಜ್ಯ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ;

ಈ) ಈ ಬಗ್ಗೆ ರಾಜ್ಯ ಸರ್ಕಾರವು ಭಾರತೀಯ ವಿಮಾನ ಯಾನ ಪ್ರಾಧಿಕಾರದೊಡನೆ ಸಂಪರ್ಕ ಹಾಗೂ ಪತ್ರ ವ್ಯವಹಾರವನ್ನು ನಡೆಸಿದೆಯೇ;

ಉ) ವಿಮಾನ ನಿಲ್ದಾಣ ಸ್ಥಾಪನೆಗೆ ಅಡ್ಡಿಯಾಗಿರುವ ತಾಂತ್ರಿಕ ಆರ್ಥಿಕ ಇನ್ನಿತರ ಸಮಸ್ಯೆಗಳು ಯಾವುವು;

ಊ) ಹಾಗಿದ್ದಲ್ಲಿ ಬಿಜಾಪುರದಲ್ಲಿ ವಿಮಾನ ನಿಲ್ದಾಣ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗಾಗಿ ಪ್ರಾರಂಭಿಸಲಾಗುವುದು?

ಶ್ರೀ ಬಿ.ಎಸ್. ಯಡಿಯೂರಪ್ಪ(ಉಪ ಮುಖ್ಯಮಂತ್ರಿ):

ಅ) ಬೆಂಗಳೂರು, ಮಂಗಳೂರು, ಹುಬ್ಬಳ್ಳಿ, ಬೆಳಗಾಂ ಈ ವಿಮಾನ ನಿಲ್ದಾಣಗಳು ಕಾರ್ಯಾಚರಣೆಯಲ್ಲಿವೆ.

ಆ) ಇ) ಈ) ಮತ್ತು ಉ) ಬಿಜಾಪುರ ತಾಲ್ಲೂಕಿನ ಅರಕೇರಿ ಗ್ರಾಮದಲ್ಲಿ 737 ಎಕರೆ ಹಾಗೂ 10 ಗುಂಟೆ ಜಮೀನಿನ ವಿಸ್ತೀರ್ಣದಲ್ಲಿ ಸುಮಾರು 390 ಎಕರೆ ಹಾಗೂ 18 ಗುಂಟೆಯನ್ನು ವಿಮಾನ ನಿಲ್ದಾಣ ಸ್ಥಾಪನೆಗೆ ಗುರುತಿಸಲಾಗಿದೆ. ಕೇಂದ್ರ ಸರ್ಕಾರದ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದೊಂದಿಗೆ ರಾಜ್ಯ ಸರ್ಕಾರವು ವ್ಯವಹರಿಸಿದೆ. ವಿಮಾನ ನಿಲ್ದಾಣ ನಿರ್ಮಾಣ ಕಾರ್ಯವನ್ನು ನಿಖರವಾದ ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತಹ ಹಂತವನ್ನು ಇನ್ನು ತಲುಪಲಾಗಿಲ್ಲ.

ಊ) ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರವು ಜೊತೆಗೂಡಿ ತಾಂತ್ರಿಕವಾದ ಹಾಗೂ ಆಡಳಿತಾತ್ಮಕವಾದ ಪರಿಶೀಲನಾ ಕ್ರಮಗಳನ್ನು ಜರುಗಿಸಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುವುದು.